**ಸಾಕ್ಷಿಯನ್ನು ದಿಃ 23.02.2024 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಎಂ ಕೆ ಎಸ್ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ ಮತ್ತು ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ನಿಪಿ. 1 ಎಂದು, ದೂರಿನ ಯಥಾ ನಕಲನ್ನು ನಿಪಿ. 2 ಎಂದು, ಸ್ಥಳ ಪಂಚನಾಮೆಯ ಯಥಾ ನಕಲನ್ನು ನಿಪಿ. 3 ಎಂದು, ಕಚ್ಚಾ ನಕ್ಷೆಯ ಯಥಾ ನಕಲನ್ನು ನಿಪಿ. 4 ಎಂದು, ಎಂವಿಎ ವರದಿಯ ಯಥಾ ನಕಲನ್ನು ನಿಪಿ. 5 ಎಂದು, ಎರಡು ಗಾಯದ ಪ್ರಮಾಣ ಪತ್ರದ ಯಥಾ ನಕಲನ್ನು ನಿಪಿ. 6 ಮತ್ತು 7 ಎಂದು, ಅಂತಿಮ ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ನಿಪಿ. 8 ಎಂದು, ಬಿಡುಗಡೆ ಸಾರಾಂಶವನ್ನು ನಿಪಿ. 9 ಎಂದು, ಕ್ರಮ ಸಂಖ್ಯೆ 1 ರಿಂದ 9 ವರೆಗಿನ ರೂ.53,348/- ಮೊತ್ತದ ಮೆಡಿಕಲ್ ಬಿಲ್ ಗಳನ್ನು ಒಟ್ಟಾಗಿ ನಿಪಿ. 10 ಎಂದು, ಎರಡು ಸಲಹಾ ಚೀಟಿಗಳನ್ನು ಒಟ್ಟಾಗಿ ನಿಪಿ. 11 ಎಂದು, ನನ್ನ ಮತ್ತು ಆರ್ಜಿದಾರರ ಆಧಾರ್ ಕಾರ್ಡ ಗಳ ನೋಟರೈಸ್ಡ್ ಪ್ರತಿಗಳನ್ನು ಹಾಜರುಪಡಿಸಿದ್ದು, ಅವುಗಳ ಮೂಲ ದಾಖಲೆಗಳೊಂದಿಗೆ ಹೋಲಿಕೆ ಮಾಡಿ ನೋಡಿ ಸರಿ ಇರುವುದು ಕಂಡು ಬಂದಿರುವುದರಿಂದ ನಿಪಿ. 12 ಮತ್ತು 13 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ನೀಡಲಾಯಿತು)

(ನಿಪಿ. 12 ಮತ್ತು 13 ರ ಮೂಲ ದಾಖಲೆಗಳನ್ನು ಪರಿಶೀಲಿಸಿ ಸಾಕ್ಷಿಗೆ ಹಿಂದಿರುಗಿಸಲಾಯಿತು)

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಪ್ರಧಾನ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.